# JANUARY 17,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ದೇಶದ ಜಿ.ಡಿ.ಪಿಗೆ ಶೇಕಡ 3 ದಶಾಂಶ 6 ರಷ್ಟು** ಕೊಡುಗೆಯನ್ನು ಜಾನುವಾರು ಉತ್ಪನ್ನಗಳು ನೀಡುತ್ತಿವೆ. ಕರ್ನಾಟಕ ರಾಜ್ಯವು, ದೇಶದ ಹಾಲು ಉತ್ಪಾದನೆಯಲ್ಲಿ 8 ನೇ ಸ್ಥಾನದಲ್ಲಿದೆ ಎಂದು ಭಾರತ ಸರ್ಕಾರದ, ಪಶುಪಾಲನಾ ಇಲಾಖೆ ನಿರ್ದೇಶಕ ವಿ.ಪಿ. ಸಿಂಗ್ ಅವರು ಹೇಳಿದರು. ಚಿಕ್ಕಬಳ್ಳಾಪುರ ಜಿಲ್ಲೆ ಮರಸನಹಳ್ಳಿ ಸೇರಿದಂತೆ ಹಲವು ಗ್ರಾಮಗಳಿಗೆ ಭೇಟಿ ನೀಡಿ ಜಾನುವಾರು ಗಣತಿಯ ಪರಿವೀಕ್ಷಣೆ ನಡೆಸಿ ಅವರು ಮಾತನಾಡಿದರು. ದೇಶಾದ್ಯಂತ 2024 ರ ಅಕ್ಟೋಬರ್ ತಿಂಗಳಿಂದ ಆರಂಭವಾಗಿರುವ 21 ನೇ ಜಾನುವಾರು ಗಣತಿ ಫೆಬ್ರವರಿ ಅಂತ್ಯದವರೆಗೂ ನಡೆಯಲಿದ್ದು, ಕರ್ನಾಟಕ ರಾಜ್ಯದಲ್ಲಿ ಈ ತನಕ ಶೇಕಡ 35 ರಷ್ಟು ಪ್ರಗತಿಯಾಗಿದೆ ಎಂದು ಅವರು ತಿಳಿಸಿದರು.

<><><>

**ಧಾರವಾಡ, ಕೃಷಿ ವಿಶ್ವವಿದ್ಯಾಲಯ ಆವರಣದಲ್ಲಿ** ಕೇಂದ್ರ ಸರಕಾರದಿಂದ ಹವಾಮಾನ ಸಂಶೋಧನ ಕೇಂದ್ರ ಸ್ಥಾಪಿಸಲು ಅನುಮತಿ ದೊರೆತಿದ್ದು, ಇದರಿಂದ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದರು. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಅಮೃತ ಮಹೋತ್ಸವ ಹಾಗೂ ಹಳೆ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

<><><>

**ಡಾಕ್ಟರ್ ಆರ್.ಸಿ ಹಿರೇಮಠ ಅವರು** ಕನ್ನಡ ಸಾಹಿತ್ಯ ಲೋಕದ ಯುಗ ಪ್ರವರ್ತಕರು. ಖ್ಯಾತ ಸಂಶೋಧಕ, ಭಾಷಾ ವಿಜ್ಞಾನಿಯಾಗಿದ್ದ ಅವರು ಶರಣ ಸಂಸ್ಕೃತಿಯ ಚಿಂತಕರೂ ಸಹ ಆಗಿದ್ದರು ಎಂದು ವಿಶ್ರಾಂತ ಪ್ರಾಧ್ಯಾಪಕ ಪ್ರೊಫೆಸರ್ ಬಿ.ಎಸ್ ಕೋಟಿಗೌಡರ ಹೇಳಿದರು. ಧಾರವಾಡ ವಿದ್ಯಾವರ್ಧಕ ಸಂಘದ ರಾ.ಹ ದೇಶಪಾಂಡೆ ಸಭಾಭವನದಲ್ಲಿ ಆಯೋಜಿಸಲಾಗಿದ್ದ 'ಡಾಕ್ಟರ್ ಆರ್.ಸಿ ಹಿರೇಮಠ, ಬದುಕು–ಬರೆಹ' ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ನಾಡಿನ ವಿವಿಧೆಡೆ ಸಂಚರಿಸಿ, ವಚನ ಸಾಹಿತ್ಯದ ಸುಮಾರು 10 ಸಾವಿರ ಹಸ್ತಪ್ರತಿ ಸಂಗ್ರಹಿಸಿ ಅಧ್ಯಯನಕ್ಕೆ ಸಹಕರಿಸಿದವರು ಹಿರೇಮಠ ಅವರು ಎಂದರು. ಇಂದು ಸಂಜೆ 6 ಗಂಟೆಗೆ, ಮರಿಗೌಡ ಫಕ್ಕೀರಗೌಡ ಪಾಟೀಲ ದತ್ತಿ ಅಂಗವಾಗಿ, 'ಸಹಕಾರ ಆಂದೋಲನ' ವಿಷಯದ ಕುರಿತು ಉಪನ್ಯಾಸ ನಡೆಯಲಿದೆ. ಸಂಸದ ಬಸವರಾಜ ಬೊಮ್ಮಾಯಿ ಅಧ್ಯಕ್ಷತೆ ವಹಿಸಲಿದ್ದಾರೆ.

<><><>

**ಉಪ ಲೋಕಾಯುಕ್ತ ನ್ಯಾಯಮೂರ್ತಿ** ಬಿ. ವೀರಪ್ಪ ಅವರು, ಬಳ್ಳಾರಿಯ ಕೃಷಿ ಉತ್ಪನ್ನ ಮಾರುಕಟ್ಟೆ, ತರಕಾರಿ ಮಂಡಿ, ಮಹಾನಗರ ಪಾಲಿಕೆಯ ತ್ಯಾಜ್ಯ ವಿಲೇವಾರಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಎ.ಪಿ.ಎಂ.ಸಿ. ವಾರ್ಷಿಕ 7 ಕೋಟಿ ರೂಪಾಯಿ ಆದಾಯ ಹೊಂದಿದ್ದರೂ, ದಾಖಲೆ ಸಮರ್ಪಕವಾಗಿ ಇಲ್ಲದಿರುವುದಕ್ಕೆ, ಅವರು ಅಸಮಾಧಾನ ವ್ಯಕ್ತ ಪಡಿಸಿದರು. ಇಂದು ಮತ್ತು ನಾಳೆ ಪ್ರಕರಣಗಳ ವಿಲೇವಾರಿ ಹಾಗೂ ಜಿಲ್ಲೆಯ ಪ್ರವಾಸ ಅವರು ಮುಂದುವರಿಸಲಿದ್ದಾರೆ.

<><><>

**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ** ಯೋಜನೆ, 'ಸಂಜೀವಿನಿ' ಅಡಿ, ಗದಗ ಜಿಲ್ಲೆ, ರೋಣದಲ್ಲಿ, ಆರ್ಥಿಕ ನೆರವು ಪಡೆದ, ಮಹಿಳಾ ಸ್ವ ಸಹಾಯ ಗುಂಪುಗಳು ತಯಾರಿಸಿದ, ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟದ, 'ಮಾಸಿಕ ಸಂತೆ'ಗೆ ಶಾಸಕ ಜಿ.ಎಸ್.ಪಾಟೀಲ ಚಾಲನೆ ನೀಡಿದರು. ರೋಣ ತಾಲೂಕಿನ, ವಿವಿಧ ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯ, 13 ಮಹಿಳಾ ಸ್ವ–ಸಹಾಯ ಸಂಘದ ಸದಸ್ಯೆಯರು ತಯಾರಿಸಿದ, ಉತ್ಪನ್ನಗಳ ಮಾರಾಟವನ್ನು ಮಾಸಿಕ ಸಂತೆಯಲ್ಲಿ ಆಯೋಜಿಸಲಾಗಿದೆ. ಮಹಿಳೆಯರಿಗೆ ಆರ್ಥಿಕ ಸ್ವಾವಲಂಬನೆ ಕಲ್ಪಿಸಲು, ಇಂತಹ ಸಂತೆಗಳು ಸಹಕಾರಿ ಎಂದು, ಶಾಸಕ ಜಿ.ಎಸ್.ಪಾಟೀಲ ಹೇಳಿದರು.

<><><>

**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,** ಕರ್ನಾಟಕ ಒಲಿಂಪಿಕ್ ಸಂಸ್ಥೆ ಹಾಗೂ ದಕ್ಷಿಣ ಕನ್ನಡ, ಉಡುಪಿ ಜಿಲ್ಲಾಡಳಿತಗಳಿಂದ ಆಯೋಜಿತವಾಗಿರುವ 'ಕರ್ನಾಟಕ ಕ್ರೀಡಾಕೂಟ –2025' ಇಂದಿನಿಂದ 23 ನೇ ತಾರೀಖಿನ ವರೆಗೆ ಮಂಗಳೂರು ಹಾಗೂ ಉಡುಪಿಯಲ್ಲಿ ಜರುಗಲಿದೆ. ಇಂದು ಸಂಜೆ 5 ಗಂಟೆಗೆ ಮಂಗಳೂರಿನ ಮಂಗಳಾ ಕ್ರೀಡಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ.

<><><>

**ಕೃಷಿ ಇಲಾಖೆ ವತಿಯಿಂದ** ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಹಾಗೂ ಗ್ರಾಹಕರಲ್ಲಿ ಅರಿವು ಮೂಡಿಸುವ ಜಾಗೃತಿ ಜಾಥಾಗೆ ಹಾಸನದ ಜಿಲ್ಲಾ ಕ್ರೀಡಾಂಗಣದಲ್ಲಿ ಶಾಸಕ ಸ್ವರೂಪ್ ಪ್ರಕಾಶ್ ಚಾಲನೆ ನೀಡಿದರು.

<><><>

**ಗದಗ ಜಿಲ್ಲೆ, ಮುಂಡರಗಿ ತಾಲೂಕಿನ** ಕೊರ್ಲಹಳ್ಳಿ ಬಳಿ, ತುಂಗಭದ್ರಾ ನೀರು ಹಸಿರು ಬಣ್ಣಕ್ಕೆ ತಿರುಗಿದ್ದು, ಆತಂಕಕ್ಕೆ ಕಾರಣವಾಗಿದೆ. ಕೂಡಲೇ ನೀರನ್ನು ತಪಾಸಣೆ ಮಾಡುವಂತೆ, ಸಂಸದ ಬಸವರಾಜ ಬೊಮ್ಮಾಯಿ, ಜಿಲ್ಲಾಡಳಿತಕ್ಕೆ ಸೂಚಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ...**

<><><>